ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ಆ.ಅಂ.ಅಪ್/01/2018-19 ದಿನಾಂಕ: 15/02/2019

\- ಸುತ್ತೋಲೆ -

**ವಿಷಯ :** ಏಪ್ರಿಲ್-2019 ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್ ನಲ್ಲಿ ಅಪ್‌ಡೇಟ್ ಮಾಡುವ ಬಗ್ಗೆ.

**ಉಲ್ಲೇಖ :** ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ:20.08.2018ರ ನಡೆದ ಸಭಾ ನಡಾವಳಿಗಳು

*****

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಏಪ್ರಿಲ್ -2019ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದುಕೊಳ್ಳುವ ಶಾಲಾ ಅಭ್ಯರ್ಥಿಗಳ (CCERF), ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆಯಾ ಶಾಲೆಯ ಮುಖ್ಯಸ್ಥರು ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡುವ ವ್ಯವಸ್ಥೆಯನ್ನು ಮಾಡಲಾಗಿದೆ.

ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ತಮ್ಮ ವ್ಯಾಪ್ತಿಯ ಎಲ್ಲಾ ಶಾಲೆಗಳ ಮುಖ್ಯಸ್ಥರು ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡಲು ಸೂಚಿಸಿದೆ.

1. ಮಂಡಳಿಯ ಜಾಲತಾಣ http://www.kseeb.kar.nic.in ನಲ್ಲಿ ತಂತ್ರಾಂಶ ಲಭ್ಯವಿದೆ.
2. ಈಗಾಗಲೇ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡಿರುವ ತಂತ್ರಾಂಶದ ಯೂಸರ್‌ನೇಮ್ ಹಾಗೂ ಪಾಸ್‌ವರ್ಡ್‌ನ್ನು ಬಳಸಿ ಆಂತರಿಕ ಅಂಕಗಳನ್ನು ಅಪ್‌ಡೇಟ್ ಮಾಡಲು ಬಳಸುವುದು.
3. ಲಾಗ್‌ಇನ್ ಆದ ನಂತರ ಮೊದಲು Internal Marks Entry ಮೇಲೆ ಕ್ಲಿಕ್ ಮಾಡಬೇಕು. ತೆರೆಯಲಾಗುವ ವೆಬ್‌ಪೇಜ್‌ನಲ್ಲಿ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು ನಮೂದಿಸಿದಾಗ ವಿದ್ಯಾರ್ಥಿಯ ಎಲ್ಲಾ ಮಾಹಿತಿಗಳು Display ಆಗುತ್ತದೆ. ವಿದ್ಯಾರ್ಥಿ ಭಾವಚಿತ್ರ, ಸಹಿ ಸಹಿತ ವಿವರಗಳು Display ಆಗುವುದರಿಂದ ಶಿಕ್ಷಕರು ಮತ್ತೊಮ್ಮೆ ತಾವು enter ಮಾಡುತ್ತಿರುವ ಅಂಕಗಳು ನಿರ್ದಿಷ್ಟ ವಿದ್ಯಾರ್ಥಿಯದೇ ಎಂದು ಖಚಿತಪಡಿಸಿಕೊಳ್ಳಲು ಸಾಧ್ಯವಿದೆ. ಇದರಿಂದಾಗಿ ಯಾವುದೇ ಕಾರಣಕ್ಕೂ ಒಬ್ಬ ವಿದ್ಯಾರ್ಥಿಯ ಅಂಕಗಳು ಮತ್ತೊಬ್ಬ ವಿದ್ಯಾರ್ಥಿಗೆ enter ಮಾಡುವ ತಪ್ಪು ಅವಕಾಶವಿರುವುದಿಲ್ಲ. ನಂತರ Hide Candidate Details Button ನ್ನು ಸಹ ಬಳಸಬಹುದಾಗಿದೆ.
4. ವಿದ್ಯಾರ್ಥಿಯು ತೆಗೆದುಕೊಂಡಿರುವ ಭಾಷೆ ಮತ್ತು ವಿಷಯಗಳು ಹಾಗೂ ತಂತ್ರಾಂಶದಲ್ಲಿ Display ಆಗಿರುವ ಭಾಷೆ ಮತ್ತು ವಿಷಯಗಳು ಸರಿಯಾಗಿರುತ್ತದೆ ಎಂದು ಖಚಿತಪಡಿಸಿಕೊಂಡು, ಆಯಾ ಭಾಷೆ ಮತ್ತು ವಿಷಯಗಳಿಗೆ ಅನುಸಾರವಾಗಿ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡಬೇಕು.
5. ಪ್ರತಿ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡಿದ ನಂತರ ವಿದ್ಯಾರ್ಥಿವಾರು ವರದಿಯ Print ಸೌಲಭ್ಯ ನೀಡಲಾಗಿದೆ. ಅವಶ್ಯವಿದ್ದಲ್ಲಿ Print Out ತೆಗೆದುಕೊಳ್ಳಬಹುದಾಗಿದ್ದು, ನಮೂದಿಸಿರುವ ಅಂಕಗಳು ಸರಿಯಿದೆಯೇ ಎಂದು ಪರಿಶೀಲಿಸಬಹುದಾಗಿದೆ. ಈ Printout ಗಳ ಆಧಾರದ ಮೇಲೆ ಪೋಷಕರ ಸಭೆಯಲ್ಲಿ ಮಗುವಿನ ಪ್ರಗತಿ ಬಗ್ಗೆ ಚರ್ಚಿಸಬಹುದಾಗಿರುತ್ತದೆ.
6. ಪರಿಶೀಲಿಸಿದ ನಂತರ ಪ್ರತಿ ವಿದ್ಯಾರ್ಥಿಯ ಮಾಹಿತಿಯನ್ನು Freeze ಮಾಡಬೇಕು. Freeze ಮಾಡಿದ ನಂತರ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

7. ವಿಕಲಚೇತನ ವಿದ್ಯಾರ್ಥಿಗಳಿಗೆ ಭಾಷಾ ವಿಷಯಗಳಿಗೆ ವಿನಾಯಿತಿಯನ್ನು ನೀಡಲಾಗಿದ್ದು, ಈ ವಿಷಯಗಳಿಗೆ ಆಂತರಿಕ ಅಂಕಗಳನ್ನು ನಮೂದಿಸಲು ಅಗತ್ಯವಿಲ್ಲ. ಈ ಆಯ್ಕೆಯನ್ನು ಸಹ ನೀಡಿರುವುದಿಲ್ಲ. ಕೆಲ ಪ್ರಕರಣಗಳಲ್ಲಿ ಪರ್ಯಾಯ ಕೋರ್ ವಿಷಯಗಳನ್ನು ಬರೆಯಲು ಅನುಮತಿ ನೀಡಲಾಗಿದ್ದು, ಈ ವಿಷಯಗಳಿಗೆ ಸಂಬಂಧಿಸಿದ ಆಂತರಿಕ ಅಂಕಗಳನ್ನು ನಮೂದಿಸಬೇಕಾಗಿದೆ.
8. ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಿದ ನಂತರ ಶಾಲೆಯ ಕ್ರೋಡೀಕೃತ ವರದಿ (Consolidated Report) ಮುದ್ರಿಸಿಕೊಳ್ಳಬಹುದಾಗಿದೆ.
9. ಎನ್.ಎಸ್.ಕ್ಯು.ಎಫ್ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನಮೂದಿಸುವ ಜೊತೆಯಲ್ಲೇ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ನಮೂದಿಸಲು ಅವಕಾಶ ನೀಡಲಾಗಿದ್ದು, ಮಾರ್ಚ್ ತಿಂಗಳಿನಲ್ಲಿ ನಡೆಯುವ ಎನ್.ಎಸ್.ಕ್ಯು.ಎಫ್ ವಿಷಯದ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ನಮೂದಿಸಬೇಕಾಗಿರುವುದರಿಂದ, ಈ ಶಾಲೆಗಳಿಗೆ ಯಾವ ದಿನಾಂಕದಿಂದ ಆಂತರಿಕ ಅಂಕಗಳನ್ನು ನಮೂದಿಸಬೇಕು ಎಂಬುದರ ಬಗ್ಗೆ ಪ್ರತ್ಯೇಕ ಸುತ್ತೋಲೆಯನ್ನು ಹೊರಡಿಸಲಾಗುವುದು.
10. ಎನ್.ಎಸ್.ಕ್ಯು.ಎಫ್ ಶಾಲೆಗಳ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಆಂತರಿಕ, ಪ್ರಾಯೋಗಿಕ ಹಾಗೂ ಬಾಹ್ಯ ಅಂಕಗಳನ್ನು ಈ ತಂತ್ರಾಂಶದಲ್ಲೇ ನಮೂದಿಸುವುದು ಕಡ್ಡಾಯವಾಗಿರುತ್ತದೆ. ಬಾಹ್ಯ ಪರೀಕ್ಷೆಗಳು ಮಾರ್ಚ್ ತಿಂಗಳಿನಲ್ಲಿ ನಡೆಯುವುದರಿಂದ, ಈ ಶಾಲೆಗಳಿಗೆ ಯಾವ ದಿನಾಂಕದಿಂದ ಮಾಹಿತಿಯನ್ನು ನಮೂದಿಸಬೇಕು ಎಂಬುದರ ಬಗ್ಗೆ ಪ್ರತ್ಯೇಕ ಸುತ್ತೋಲೆಯನ್ನು ಹೊರಡಿಸಲಾಗುವುದು.
11. ಜೆ.ಟಿ.ಎಸ್ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನಮೂದಿಸುವ ಜೊತೆಯಲ್ಲೇ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ನಮೂದಿಸಲು ಅವಕಾಶ ನೀಡಲಾಗಿದ್ದು, ಸದರಿ ವಿದ್ಯಾರ್ಥಿಗಳ ಪ್ರಾಯೋಗಿಕ ಪರೀಕ್ಷೆಯು ಏಪ್ರಿಲ್ ಮಾಹೆಯಲ್ಲಿ ಮುಕ್ತಾಯವಾಗುವುದರಿಂದ, ಈ ಶಾಲೆಗಳಿಗೆ ದಿ:06.04.2019 ರಿಂದ 10.04.2019 ವರೆಗೆ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ಕಲ್ಪಿಸಿದೆ.
12. ಆಂತರಿಕ ಅಂಕಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಫಲಿತಾಂಶ ಪ್ರಕಟವಾದ ದಿನಾಂಕದಿಂದ ಕನಿಷ್ಠ ನಾಲ್ಕು ತಿಂಗಳು ಕಾಯ್ದಿರಿಸುವುದು.

ಆಯಾ ಶಾಲೆಯ ಮುಖ್ಯಸ್ಥರು ದಿನಾಂಕ: 28.02.2019 ರೊಳಗೆ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಲು ಸೂಚಿಸಿದೆ. ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಶಾಲೆಗಳ ಆಂತರಿಕ ಅಂಕಗಳನ್ನು ನಮೂದಿಸುವ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಕ್ರಮವಹಿಸಲು ತಿಳಿಸಿದೆ. ಇದಕ್ಕಾಗಿ ತಮ್ಮ ವ್ಯಾಪ್ತಿಯಲ್ಲಿನ ಶಾಲೆಗಳಲ್ಲಿನ ಆಂತರಿಕ ಅಂಕಗಳ ನಮೂದು ಕಾರ್ಯದ ಪ್ರಗತಿಯನ್ನು ಮಂಡಳಿಯ ಜಾಲತಾಣದ ಜಿಲ್ಲಾ ಲಾಗ್ಇನ್‌ನಲ್ಲಿ ಉಪನಿರ್ದೇಶಕರು/ನೋಡಲ್ ಅಧಿಕಾರಿಗಳು ಪ್ರತಿ ದಿನ ಪಡೆದು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಮಾಹಿತಿ ನೀಡಲು ಕ್ರಮ ವಹಿಸುವುದು.

ಆಂತರಿಕ ಅಂಕಗಳನ್ನು ಶಾಲಾ ಹಂತದಲ್ಲಿ ಪ್ರಥಮ ಬಾರಿಗೆ ಆನ್‌ಲೈನ್‌ನಲ್ಲಿ ನಮೂದು ಮಾಡುತ್ತಿರುವುದರಿಂದ ಮುಖ್ಯಶಿಕ್ಷಕರು ಎದುರಿಸಬಹುದಾದ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಸಲುವಾಗಿ ಮಂಡಳಿಯಲ್ಲಿ ದೂರವಾಣಿ ಮೂಲಕ ಸಹಾಯವಾಣಿಯನ್ನು ಆಯೋಜಿಸಲಾಗಿದೆ. ಸಹಾಯವಾಣಿ ಸಂಖ್ಯೆಗಳು–08023310075, 08023310076. ಅಲ್ಲದೆ ಮಂಡಳಿಯ ಜಾಲತಾಣದಲ್ಲಿ ಚಿತ್ರಸಹಿತ ಮಾರ್ಗದರ್ಶಿ ಕೈಪಿಡಿಯನ್ನೂ (User Manual) ಸಹ ಅಳವಡಿಸಲಾಗಿದೆ.

15/2/19
(ಸುಮಂಗಲ. ವಿ)
ನಿರ್ದೇಶಕರು, ಪರೀಕ್ಷೆಗಳು

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ